# ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ

# 10, 3ನೇ ಮಹಡಿ, ಖಾದಿಭವನ, ಜಸ್ಮಾದೇವಿ ಭವನ ರಸ್ತೆ, ವಸಂತನಗರ, ಬೆಂಗಳೂರು-52

ದೂರವಾಣಿ ಸಂಖ್ಯೆ:22250017/18, ಫ್ಯಾಕ್ಸ್ ಸಂಖ್ಯೆ:22250051

ಇ-ಮೇಲ್:mdkstdevp@yahoo.co.in / mdkmvstdc@gmail.com

WEB: http://www.karnataka.gov.in/kmvstdcl/Pages/home.aspx


## ಪ್ರಕಟಣೆ

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮವು, 2019-20ನೇ ಸಾಲಿಗೆ ಪರಿಶಿಷ್ಟ ಪಂಗಡದ ಜನರ ಆರ್ಥಿಕ ಅಭಿವೃದ್ಧಿಗಾಗಿ ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಮೈಕ್ರೋಕ್ರೆಡಿಟ್ ಯೋಜನೆ, ಮತ್ತು ಸಮಗ್ರ ಗಂಗಾ ಕಲ್ಯಾಣ ಯೋಜನೆಗಳಡಿಯಲ್ಲಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸುತ್ತಿದ್ದು, ನಿಗಮದ ಆಯಾ ಜಿಲ್ಲಾ ಕಛೇರಿಗಳಲ್ಲಿ ದಿನಾಂಕ 01-06-2019 ರಿಂದ ಅರ್ಜಿಗಳನ್ನು ವಿತರಿಸಲಾಗುವುದು ಹಾಗೂ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ:31.07.2019 ಆಗಿರುತ್ತದೆ.

**ನಿಗಮದಿಂದ ವಿವಿಧ ಯೋಜನೆಗಳಡಿ ಸೌಲಭ್ಯ ಪಡೆಯಲು ಇರಬೇಕಾದ ಸಾಮಾನ್ಯ ಅರ್ಹತೆಗಳು**

1. ಅರ್ಜಿದಾರರು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು ಹಾಗೂ ಕಳೆದ ಕನಿಷ್ಟ 15 ವರ್ಷಗಳಿಂದ ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.
2. ಅರ್ಜಿದಾರರು 18 ವರ್ಷದಿಂದ 60 ವರ್ಷದೊಳಗಿನ ವಯೋಮಾನದವರಾಗಿರಬೇಕು.
3. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ಗ್ರಾಮೀಣ ಪ್ರದೇಶವಾದಲ್ಲಿ ರೂ.1,50,000/- ಹಾಗೂ ನಗರ ಪ್ರದೇಶವಾದಲ್ಲಿ ರೂ.2,00,000/- ಮಿತಿಯೊಳಗಿರಬೇಕು.
4. ಅರ್ಜಿದಾರರ ಕುಟಂಬದ ಯಾವುದೇ ಸದಸ್ಯರು ಸರ್ಕಾರಿ / ಅರೆ ಸರ್ಕಾರ ಸಂಸ್ಥೆಯಲ್ಲಿ ನೌಕರಿಯಲ್ಲಿರಬಾರದು.
5. ಅರ್ಜಿದಾರರು ಅಥವಾ ಅವರ ಕುಟುಂಬದವರು ಈ ಹಿಂದೆ ನಿಗಮದಿಂದ ಯಾವುದೇ ಸೌಲಭ್ಯ ಪಡೆದಿರಬಾರದು.
6. ಜಿಲ್ಲೆಯಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಈಗಾಗಲೇ ನೊಂದಣಿ ಮಾಡಿಕೊಂಡಿರುವ ಪರಿಶಿಷ್ಟ ಪಂಗಡದ ಅಂಗವಿಕಲ ಫಲಾನುಭವಿಗಳ ಲಭ್ಯವಿರುವ ಪಟ್ಟಿಯಿಂದ ಅಂಗವಿಕಲರನ್ನು ನೇರವಾಗಿ ಸಂದರ್ಶನ ಮಾಡಿ ಶೇ.5ರಷ್ಟು ಮೀಸಲಾತಿಯನ್ನು ನೀಡಿ ಸೌಲಭ್ಯ ಕಲ್ಪಿಸಲಾಗುವುದು.
7. ವಾಹನಗಳಿಗೆ ಸೌಲಭ್ಯ ಪಡೆಯಲು ಫಲಾಪೇಕ್ಷಿಗಳು ಡ್ರೈವಿಂಗ್ ಲೈಸೆನ್ಸ್‌ನೊಂದಿಗೆ ಬ್ಯಾಡ್ಜ್ ಅನ್ನೂ ಹೊಂದಿರಬೇಕು.
8. ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಪಡೆಯಲು ಫಲಾಪೇಕ್ಷಿಯು ಕನಿಷ್ಟ 1-20 ಎಕರೆಯಿಂದ ಗರಿಷ್ಟ 5-00 ಎಕರೆ ಜಮೀನು ಹೊಂದಿದ ಸಣ್ಣ ಮತ್ತು ಅತೀ ಸಣ್ಣ ರೈತರಾಗಿರಬೇಕು.

***ಫಲಾಪೇಕ್ಷಿಯು ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು***

1. ಪಾಸ್ ಪೋರ್ಟ್ ಅಳತೆಯ ಭಾವ ಚಿತ್ರ
2. ಜಾತಿ ಪ್ರಮಾಣ ಪತ್ರ
3. ಕುಟುಂಬದ ವಾರ್ಷಿಕ ವರಮಾನ ಪತ್ರ
4. ಪಡಿತರ ಚೀಟಿ / ಆಧಾರ್ ಕಾರ್ಡ್
5. ಅರ್ಜಿದಾರರು ಹೊಂದಿರುವ ಬ್ಯಾಂಕ್ ಉಳಿತಾಯ ಖಾತೆಯ ವಿವರಗಳನ್ನೊಳಗೊಂಡ ಪಾಸ್ ಬುಕ್‌ನ ಮೊದಲ ಪುಟದ ಪ್ರತಿ.
6. ಯೋಜನಾ ವರದಿ / ದರಪಟ್ಟಿ (ಅನ್ವಯವಾಗುವ ಘಟಕಗಳಿಗೆ)
7. ವಾಹನವಾಗಿದ್ದಲ್ಲಿ, ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಪಡೆದ ವಾಹನ ಚಾಲನಾ ಪರವಾನಗಿ ಮತ್ತು ಬ್ಯಾಡ್ಜ್‌ನ ಪ್ರತಿ ಹಾಗೂ ವಯಸ್ಸು 50 ವರ್ಷದೊಳಗಿರುವ ಬಗ್ಗೆ ದೃಢೀಕರಣ ಪತ್ರ
8. ಗಂಗಾ ಕಲ್ಯಾಣ ಯೋಜನೆಯಡಿ ಸೌಲಭ್ಯ ಪಡೆಯಲು ಚಾಲ್ತಿ ಪಹಣಿ (ಆರ್.ಟಿ.ಸಿ. ಜೆರಾಕ್ಸ್) ಮತ್ತು ಸಣ್ಣ ಮತ್ತು ಅತೀ ಸಣ್ಣ ಹಿಡುವಳದಾರರ ಪ್ರಮಾಣ ಪತ್ರ

**1. ಸ್ವಯಂ ಉದ್ಯೋಗ ಕಾರ್ಯಕ್ರಮ :-**

**ಅ) ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ**

ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆಯಡಿ ಅನುಷ್ಠಾನಗೊಳಸುತ್ತಿರುವ ಯೋಜನೆಗಳು ಬ್ಯಾಂಕ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯ ಘಟಕ ವೆಚ್ಚ ಮತ್ತು ಸಹಾಯಧನದ ಮಿತಿ ಈ ಕೆಳಕಂಡಂತಿದೆ.

ಘಟಕ ವೆಚ್ಚ : ರೂ 5 ಲಕ್ಷದ ವರೆಗೆ, ಸಹಾಯಧನ: ಘಟಕ ವೆಚ್ಚದ ಶೇ.70 ರಷ್ಟು, ಗರಿಷ್ಠ ರೂ.3.50 ಲಕ್ಷ.
ಘಟಕ ವೆಚ್ಚ : ರೂ 5 ಲಕ್ಷ ಮೇಲ್ಪಟ್ಟು 10.00 ಲಕ್ಷದ ವರೆಗೆ, ಸಹಾಯಧನ ಘಟಕ ವೆಚ್ಚದ ಶೇ.60 ರಷ್ಟು, ಗರಿಷ್ಠ ರೂ.5.00 ಲಕ್ಷ.
ಘಟಕ ವೆಚ್ಚ : ರೂ 10.00 ಲಕ್ಷ ದಿಂದ ಮೇಲ್ಪಟು 20.00 ಲಕ್ಷದ ವರೆಗೆ, ಸಹಾಯಧನ ಘಟಕ ವೆಚ್ಚದ ಶೇ. 50 ರಷ್ಟು, ಗರಿಷ್ಠ ರೂ.5.00 ಲಕ್ಷ.

**2. ಪ್ರೇರಣಾ ಯೋಜನೆ :-**

**ಆ) ಮೈಕ್ರೋ ಕ್ರೆಡಿಟ್ ಯೋಜನೆ** : ಈ ಯೋಜನೆಯಡಿ ಸ್ವ ಸಹಾಯ ಗುಂಪುಗಳಲ್ಲಿ ಸದಸ್ಯರಾಗಿರುವ ಪರಿಶಿಷ್ಟ ಪಂಗಡದ ಮಹಿಳಾ ಫಲಾಪೇಕ್ಷಿಗಳಿಗೆ ಸಣ್ಣ ಪ್ರಮಾಣದ ವ್ಯಾಪಾರ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಲು ಸ್ವಸಹಾಯ ಗುಂಪುಗಳಿಗೆ ಆರ್ಥಿಕ ನೆರವು ಒದಗಿಸಲಾಗುವುದು. ಒಬ್ಬ ಸದಸ್ಯರಿಗೆ ರೂ.15000/- ಸಹಾಯಧನ ಮತ್ತು ರೂ.10000/- ನೇರ ಸಾಲ ಸೇರಿದಂತೆ ಒಟ್ಟು ರೂ.25000/-ಗಳಂತೆ ಒಟ್ಟು 10 ಸದಸ್ಯರಿಗೆ ರೂ.2.50 ಲಕ್ಷ ನೀಡಲಾಗುವುದು. ಒಂದು ವೇಳೆ ಸಂಘದಲ್ಲಿ 10 ಕ್ಕಿಂತ ಹೆಚ್ಚು ಸದಸ್ಯರಿದ್ದಲ್ಲಿ ಸಂಖ್ಯೆಗನುಗುಣವಾಗಿ ಸಾಲ ಸೌಲಭ್ಯ ನೀಡಲಾಗುವುದು. ಘಟಕ ವೆಚ್ಚದಲ್ಲಿ ಸಹಾಯಧನ ಮತ್ತು ಸಾಲದ ಮೊತ್ತವನ್ನು ನಿಗಮದಿಂದಲೇ ನೀಡಲಾಗುವುದು. ಸಾಲದ ಹಣಕ್ಕೆ ಬಡ್ಡಿ ವಾರ್ಷಿಕ ಶೇ.4ರಷ್ಟಿದ್ದು, ಸಾಲದ ಹಣವನ್ನು ಬಡ್ಡಿ ಸಮೇತವಾಗಿ 36 ಮಾಸಿಕ ಸಮಕಂತುಗಳಲ್ಲಿ ನಿಗಮಕ್ಕೆ ಮರುಪಾವತಿ ಮಾಡಬೇಕು

3. **ಸಮಗ್ರ ಗಂಗಾ ಕಲ್ಯಾಣ ಯೋಜನೆ :-**

**ಇ) ವೈಯಕ್ತಿಕ ನೀರಾವರಿ ಕೊಳವೆ ಬಾವಿ /ತೆರೆದ ಬಾವಿ ಯೋಜನೆ** : ಪರಿಶಿಷ್ಟ ಪಂಗಡಗಳ ಸಣ್ಣ ಮತ್ತು ಅತೀಸಣ್ಣ ರೈತರುಗಳು ಹೊಂದಿರುವ ಕನಿಷ್ಟ 1-20 ಎಕರೆಯಿಂದ ಗರಿಷ್ಠ 5-00 ಎಕರೆವರೆಗೂ ಖುಷ್ಕಿ ಜಮೀನಿನಲ್ಲಿ ಕೊಳವೆ ಬಾವಿ ಕೊರೆದು ಅಥವಾ ತೆರೆದ ಬಾವಿ ನಿರ್ಮಿಸಿ, ಪಂಪ್ ಮೋಟಾರ್ ಅಳವಡಿಸಿ, ವಿದ್ಯುದ್ಧೀಕರಣಗೊಳಿಸಿ, ನೀರಾವರಿ ಸೌಲಭ್ಯ ಒದಗಿಸುವುದು ಈ ಯೋಜನೆಯ ಅನುಷ್ಟಾನದ ಉದ್ದೇಶವಾಗಿರುತ್ತದೆ. ಕರಾವಳ ಮತ್ತು ಮಲೆನಾಡು ಜಿಲ್ಲೆಗಳಾದ ಉಡುಪಿ, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಮತ್ತು ಉತ್ತರ ಕನ್ನಡ ಜಿಲ್ಲೆಗಳಿಗೆ ಸಂಬಂಧಪಟ್ಟಂತೆ ಮಾತ್ರ ಕನಿಷ್ಟ ಮಿತಿ 1-00 ಎಕರೆ ಇರುತ್ತದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ, ರಾಮನಗರ ಮತ್ತು ತುಮಕೂರು ಜಿಲ್ಲೆಗಳಿಗೆ ಮಾತ್ರ ಸೀಮಿತಗೊಂಡಂತೆ ಘಟಕ ವೆಚ್ಚ ರೂ.4.50 ಲಕ್ಷವಿದ್ದು, ಇದರಲ್ಲಿ ರೂ.3.50 ಲಕ್ಷ ಸಹಾಯಧನ, ರೂ. 0.50 ಲಕ್ಷ ವಿದ್ಯುದ್ಧೀಕರಣಕ್ಕೆ ಹಾಗೂ ಅವಧಿಸಾಲ ರೂ.0.50 ಲಕ್ಷಗಳಿಗೆ ನಿಗಧಿಪಡಿಸಲಾಗಿದೆ. ಉಳಿದ ಜಿಲ್ಲೆಗಳಿಗೆ ರೂ.3.50 ಲಕ್ಷ ಘಟಕ ವೆಚ್ಚ ನಿಗಧಿಪಡಿಸಲಾಗಿದ್ದು, ರೂ.2.50 ಲಕ್ಷದ ಸಹಾಯಧನ ಹಾಗೂ ರೂ.0.50 ಲಕ್ಷ ವಿದ್ಯುದ್ಧೀಕರಣ ಮತ್ತು ರೂ.0.50 ಲಕ್ಷ ಅವಧಿ ಸಾಲವಾಗಿರುತ್ತದೆ.

**ಹೆಚ್ಚಿನ ಮಾಹಿತಿಯನ್ನು ಜಿಲ್ಲಾ ಕಛೇರಿಯಿಂದ ಹಾಗೂ ನಿಗಮದ ವೆಬ್ ಸೈಟ್‌ನಿಂದ ಪಡೆಯಬಹುದು.**

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಪರಿಶಿಷ್ಟ ಪಂಗಡದ ಫಲಾಪೇಕ್ಷಿಗಳು ಆಯಾ ಜಿಲ್ಲೆಯ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ನಿಗದಿಪಡಿಸಿದ ಉಚಿತ ಅರ್ಜಿಗಳನ್ನು ಪಡೆಯಬಹುದು ಹಾಗೂ ನಿಗಮದ ವೆಬ್‌ಸೈಟ್ **www.karnataka.gov.in/kmvstdcl** ಪ್ರಕಟಣೆ ಮೆನುವಿನಲ್ಲಿ ಅರ್ಜಿಗಳನ್ನು ಡೌನ್ ಲೋಡ್ ಮಾಡಿಕೊಳ್ಳಬಹುದು.

ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಕಛೇರಿಗೆ **ದಿನಾಂಕ:01.06.2019** ರಿಂದ 31.07.2019 ರೊಳಗೆ ಸಲ್ಲಿಸುವುದು. ಅಂತಿಮ **ದಿನಾಂಕ:31.07.2019ರ** ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಸಂಪರ್ಕಿಸಬಹುದಾದ ನಿಗಮದ ಜಿಲ್ಲಾ ಕಛೇರಿಗಳ ದೂರವಾಣಿ ಸಂಖ್ಯೆಗಳು:**

| | | | | | |
|---|---|---|---|---|---|
| 1) ಬೆಂಗಳೂರು ನಗರ | 080-22220867 | 11)ಚಿಕ್ಕಬಳ್ಳಾಪುರ | 08156-277161 | 21)ಮಂಡ್ಯ | 08232-221157 |
| 2)ಬೆಂಗಳೂರು ಗ್ರಾಮಾಂತರ | 080-22220867 | 12)ದಾವಣಗೆರೆ | 08192-233309 | 22)ಮಂಗಳೂರು | 0824-2420114 |
| 3)ಬಾಗಲಕೋಟೆ | 08354-235016 | 13)ಧಾರವಾಡ | 0836-2460855 | 23) ಮಡಿಕೇರಿ | 08272-229383 |
| 4)ಬೀದರ್ | 8482233147 | 14)ಗದಗ | 08372-239557 | 24)ಮೈಸೂರು | 0821-2430022 |
| 5)ವಿಜಯಪುರ | 08352-276743 | 15)ಕಲಬುರ್ಗಿ | 08472-221331 | 25)ರಾಯಚೂರು | 08532-220486 |
| 6)ಬಳ್ಳಾರಿ | 08392-245551 | 16)ಹಾಸನ | 08172-235336 | 26)ರಾಮನಗರ | 080-27271012 |
| 7)ಬೆಳಗಾವಿ | 0831-2451252 | 17)ಹಾವೇರಿ | 08375-234408 | 27)ಶಿವಮೊಗ್ಗ | 08182-276776 |
| 8)ಚಾಮರಾಜನಗರ | 08226-223856 | 18)ಕಾರವಾರ | 08382-226903 | 28)ತುಮಕೂರು | 0816-2280165 |
| 9)ಚಿಕ್ಕಮಗಳೂರು | 08262-220779 | 19)ಕೋಲಾರ | 08152-222561 | 29)ಉಡುಪಿ | 0820-2574884 |
| 10)ಚಿತ್ರದುರ್ಗ | 08194-221055 | 20)ಕೊಪ್ಪಳ | 08539-221176 | 30)ಯಾದಗಿರಿ | 08473-253271 |

**ಸಹಿ/-**
**ಬಸನಗೌಡ ದದ್ದಲ,**
**ಶಾಸಕರು ಮತ್ತು ಅಧ್ಯಕ್ಷರು,**
ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ
ಪಂಗಡಗಳ ಅಭಿವೃದ್ಧಿ ನಿಗಮ,
ಬೆಂಗಳೂರು

**ಸಹಿ/-**
**ಕುಮಾರ್ ನಾಯಕ, ಭಾ.ಆ.ಸೇ,**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಸಮಾಜ ಕಲ್ಯಾಣ ಇಲಾಖೆ

**ಸಹಿ/-.**
**ಟಿ. ರಾಘವೇಂದ್ರ. ಕ.ಆ.ಸೇ.,**
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ
ಪಂಗಡಗಳ ಅಭಿವೃದ್ಧಿ ನಿಗಮ,
ಬೆಂಗಳೂರು